ಶ್ರೀನಿವಾಸ ಕಲ್ಯಾಣ (ವಾದಿರಾಜರು ವಿರಚಿತ)

ಸ್ತ್ರೀಯರೆಲ್ಲರು ಬನ್ನಿರೆ | ಶ್ರೀನಿವಾಸನ ಪಾಡಿರೇ
ಜ್ಞಾನಗುರುಗಳಿಗೊಂದಿಸಿ | ? ಮುಂದೆ ಕಥೆಯ ಪೇಳುವೆ ||

ಗಂಗತೀರದಿ ಋಷಿಗಳು | ಅಂದು ಯಾಗವ ಮಾಡ್ಡರು
ಬಂದು ನಾರದ ನಿಂತುಕೊಂಡು | ಯಾರಿಗೆಂದು ಕೇಳಲು

ಅರಿತು ಬರಾಬೇಕು ಎಂದು | ಆ ಮುನಿಯು ತೆರಳಿದ
-ಭೃಗುಮುನೀಯು ತೆರಳಿದ
ನಂದಗೋಪನ ಮಗನ ಕಂದನ | ಮಂದಿರಕಾಗೆ ಬಂದನು

ವೇದಗಳನೆ ಓದುತಾ | ಹರಿಯನೂ ಕೊಂಡಾಡುತಾ
ಇರುವ ಬೊಮ್ಮನ ನೋಡಿದ | ಕೈಲಾಸಕ್ಕೆ ಬಂದನು

ಶಂಭುಕಂಠನು ಪಾರ್ವತೀಯೂ | ಕಲೆತಿರುವುದ ಕಂಡನು
ಸೃಷ್ಟಿಯೊಳಗೆ ನಿನ್ನ ಲಿಂಗ | ಶ್ರೇಷ್ಠವಾಗಲೆಂದನು

ವೈಕುಂಠಕ್ಕೆ ಬಂದನು | ವಾರಿಜಾಕ್ಷನ ಕಂಡನು
ಕೆಟ್ಟ ಕೋಪದಿಂದ ಒದ್ದರೆ | ಎಷ್ಟು ನೊಂದಿತೆಂದನು

ತಟ್ಟನೆ ಬಿಸಿನೀರಿನಿಂದ | ನೆಟ್ಟಗೆ ಪಾದ ತೊಳೆದನು
ಬಂದ ಕಾರ್ಯ ಆಯಿತೆಂದು | ಅಂದು ಮುನಿಯು ತೆರಳಿದ
ಬಂದು ನಿಂದು ಸಭೆಯೊಳಗೆ | ಇಂದಿರೇಶನ ಹೊಗಳಿದ

ಪತಿಯ ಕೂಡೆ ಕಲಹ ಮಾಡಿ | ಕೊಲ್ಹಾಪುರಕೆ ಹೋದಳು

ಸತಿಯು ಪೋಗೆ ಪತಿಯು ಹೊರಟು | ಗಿರಿಗೆ ಬಂದು ಸೇರಿದ

ಹುತ್ತದಲ್ಲೆ ಹತ್ತು ಸಾವಿರ ವರುಷ | ಗುಪ್ತವಾಗಿ ಇದ್ದನು
ಬ್ರಹ್ಮ ಧೇನುವಾದನು | ರುದ್ರ ವತ್ಸನಾದನು

ಧೇನು ಮುಂದೆ ಮಾಡಿಕೊಂಡು | ಗೋಪಿ ಹಿಂದೆ ಬಂದಳು
ಕೋಟ ಹೊನ್ನು ಬಾಳುವೋದು | ಕೊಡದ ಹಾಲು ಕರೆವುದು

ಪ್ರೀತಿಯಿಂದಲು ತನ್ನ ಮನೆಗೆ | ತಂದುಕೊಂಡನು ಚೋಳನು
ಒಂದು ದಿವಸ ಕಂದಗೆ ಹಾಲು | ಚೆಂದದಿಂದಲಿ ಕೊಡಲಿಲ್ಲ.

ಅಂದು ರಾಯನ ಮಡದಿ ಕೋಪಿಸಿ | ಬಂದು ಗೋಪನ ಹೊಡೆದಳು
ಧೇನು ಮುಂದೆ ಮಾಡಿಕೊಂಡು | ಗೋಪ ಹಿಂದೆ ನಡೆದನು

ಕಾಮಧೇನು ಕರೆದ ಹಾಲು | ಹರಿಯ ಶಿರಕೆ ಬಿದ್ದಿತು
ಇಷ್ಟು ಕಷ್ಟ ಬಂದಿತೆಂದು | ಪೆಟ್ಟು ಬಡಿಯೆ ಹೋದನು

ಕೃಷ್ಣ ತನ್ನ ಮನದಲ್ಯೋಚಿಸಿ | ಕೊಟ್ಟ ತನ್ನ ಶಿರವನು
ಏಳು ತಾಳೆಮರದ ಉದ್ದ | ಏಕವಾಗಿ ಹರಿಯಿತು

ರಕ್ತವನ್ನು ನೋಡಿ ಗೋಪ | ಮತ್ತೆ ಸ್ವರ್ಗಕ್ಕೇರಿದ
ಕಷ್ಟವನ್ನು ನೋಡಿ ಗೋವು | ಅಷ್ಟು ಬಂದ್-ಹೇಳಿತು

ತಟ್ಟನೆ ರಾಯ ಎದ್ದು ಗಿರಿಗೆ | ಬಂದು ಬೇಗ ಸೇರಿದ
ಏನು ಕಷ್ಟ ಇಲ್ಲಿ ಹೀಗೆ | ಯಾವ ಪಾಪಿ ಮಾಡಿದ

ಇಷ್ಟು ಕಷ್ಟ ಕೊಟ್ಟವಾಗೆ । ಭ್ರಷ್ಟಪಿಶಾಚಿಯಾಗೆಂದ
ಪೆಟ್ಟು ವೇದನೆ ತಾಳಲಾರದೆ । ಬೃಹಸ್ಪತೀಯ ಕರೆಸಿದ

ಅರುಣ ಉದಯದಲ್ಲೆದ್ದು । ಔಷಧಕ್ಕೆ ಪೋದನು
ಕ್ರೋಡರೂಪಿಯ ಕಂಡನು । ಕೂಡಿ ಮಾತನಾಡಿದನು

ಇರುವುದಕ್ಕೆ ಸ್ಥಳವು ಎನಗೆ । ಎರ್ಪಾಡಾಗಬೇಕೆಂದ
ನೂರು ಪಾದ ಭೂಮಿ ಕೊಟ್ಟರೆ । ಮೊದಲು ಪೂಜೆ ನಿಮಗೆಂದ

ಪಾಕ ಪಕ್ವ ಮಾಡುವುದಕ್ಕೆ । ಆಕೆ ಬಕುಳೆ ಬಂದಳು
ಭಾನುಕೋಟಿತೇಜನೀಗ । ಬೇಟೆಯಾಡ ಹೊರಟನು

ಮಂಡೆ ಬಾಚಿ ದೊಂಡೆ ಹಾಕಿ । ದುಂಡುಮಲ್ಲಿಗೆ ಮುಡಿದನು
ಹಾರ ಪದಕ ಕೊರಳಲ್ಹಾಕಿ । ಫಣೆಗೆ ತಿಲಕವಿಟ್ಟನು

ಅಂಗುಲಿಗೆ ಉಂಗುರ । ರಂಗಶೃಂಗಾರವಾದವು
ಪಟ್ಟೆನುಟ್ಟು ಕಚ್ಚೆ ಕಟ್ಟಿ । ಪೀತಾಂಬರವ ಹೊದ್ದನು

ಢಾಳು ಕತ್ತಿ ಉಡಿಯಲ್ ಸಿಕ್ಕಿ । ಜೋಡು ಕಾಲಲ್ಲಿ ಮೆಟ್ಟಿದ
ಕರದಿ ವೀಳ್ಯವನ್ನೆ ಪಿಡಿದು । ಕನ್ನದೀಯ ನೋಡಿದ

ಕನಕಭೂಷಣವಾದ ತೊಡಿಗೆ । ಕಮಲನಾಭ ತೊಟ್ಟನು
ಕನಕಭೂಷಣವಾದ ಕುದುರೆ । ಕಮಲನಾಭ ಏರಿದ

ಕರಿಯ ಹಿಂದೆ ಹರಿಯು ಬರಲು । ಕಾಂತೆರೆಲ್ಲ ಕಂಡರು

ಯಾರು ಇಲ್ಲಿ ಬರುವರೆಂದು । ದೂರ ಪೋಗಿರೆಂದರು

ನಾರಿಯರಿರುವ ಸ್ಥಳಕೆ । ಯಾವ ಪುರುಷ ಬರುವನು
ಎಷ್ಟು ಹೇಳೆ ಕೇಳ ಕೃಷ್ಣ । ಕುದುರೆ ಮುಂದೆ ಬಿಟ್ಟನು

ಅಷ್ಟು ಮಂದೀರೆಲ್ಲ ಸೇರಿ । ಪೆಟ್ಟುಗಳನು ಹೊಡೆದರು
ಕಲ್ಲುಮಳೆಯ ಕರೆದರಾದ । ಕುದುರೆ ಕೆಳಗೆ ಬೀದ್ದಿತು

ಕೇಶ ಬಿಚ್ಚಿ ವಾಸುದೇವ । ಶೇಷಗಿರಿಗೆ ಬಂದನು
ಪರಮಾನ್ನ ಮಾಡಿದ್ದೇನೆ । ಉಣ್ಣು ಬೇಗ ಎಂದಳು

ಅಮ್ಮ ಎನಗೆ ಅನ್ನ ಬೇಡ । ಎನ್ನ ಮಗನೆ ವೈರಿಯೇ
ಕಣ್ಣಿಲ್ಲಾದ ದೈವ ಅವಳ । ನಿರ್ಮಾಣವ ಮಾಡಿದ

ಯಾವ ದೇಶ ಯಾವೋಳಾಕೆ । ಎನಗೆ ಪೇಳು ಎಂದಳು
ನಾರಾಯಣನ ಪುರಕೆ ಪೋಗಿ । ರಾಮಕೃಷ್ಣರ ಪೂಜಿಸಿ

ಕುಂಜಮಣಿಯ ಕೊರಳಲ್ಹಾಕಿ । ಕೂಸಿನ್ ಕೊಂಕಳಲೆತ್ತಿದಾ
ಧರಣಿದೇವಿಗೆ ಕಣಿಯ ಹೇಳಿ । ಗಿರಿಗೆ ಬಂದು ಸೇರಿದ

ಕಾಂತೆರೆಲ್ಲ ಕೂಡಿಕೊಂಡು । ಆಗ ಬಕುಳೆ ಬಂದಳು
ಬನ್ನಿರೆಮ್ಮ ಸದನಕೆನುತ । ಬಹಳ ಮಾತನಾಡಿದರು

ತಂದೆತಾಯಿ ಬಂಧುಬಳಗ । ಹೊನ್ನು ಹಣ ಉಂಟೆ0ದರು
ಇಷ್ಟು ಪರಿಯಲ್ಲಿದ್ದವಗೆ । ಕನ್ಯೆ ಯಾಕೆ ದೊರೆಕ್ಕಿಲ್ಲಾ

ದೊಡ್ಡವಳಿಗೆ ಮಕ್ಕಳಿಲ್ಲ । ಮತ್ತೆ ಮದುವೆ ಮಾಡ್ವೆವು
ಬೃಹಸ್ಪತೀಯ ಕರೆಸಿದ । ಲಗ್ನಪತ್ರಿಕೆ ಬರೆಸಿದ (ಕಳುಹಿದ)

ವನ್ನಭೇನ ಕರೆವುದಕ್ಕೆ । ಕೊಲ್ಹಾಪುರಕೆ ಪೋದರು
ಗರುಡನ್ ಹೆಗಲನೇರಿಕೊಂಡು । ಬೇಗ ಹೊರಟುಬಂದರು

ಅಷ್ಟವರ್ಗವನ್ನು ಮಾಡಿ । ಇಷ್ಟದೇವರನ್ನು ಪೂಜಿಸಿ
ಲಕ್ಷ್ಮೀಸಹಿತ ಆಕಾಶರಾಜನ । ಪಟ್ಟಣಕ್ಕೆ ಬಂದರು

ಕನಕಭೂಷಣವಾದ ತೊಡಿಗೆ । ಕಮಲನಾಥ ತೊಟ್ಟನು
ಕನಕಭೂಷಣವಾದ ಮಂಟಪ । ಕಮಲನಾಭ ಏರಿದ

ಕಮಲನಾಭಗೆ ಕಾಂತೆಮಣಿಯ । ಕನ್ಯದಾನವ ಮಾಡಿದ
ಕಮಲನಾಭ ಕಾಂತೆ ಕೈಗೆ । ಕಂಕಣವನ್ನೆ ಕಟ್ಟಿದ
ಶ್ರೀನಿವಾಸ ಪದ್ಮಾವತಿಗೆ । ಮಾಂಗಲ್ಯವನೆ ಕಟ್ಟಿದ

ಶ್ರೀನಿವಾಸನ ಮದುವೆ ನೋಡೆ । ಸ್ತ್ರೀಯರೆಲ್ಲರು ಬನ್ನಿರೇ
ಪದ್ಮಾವತಿಯ ಮದುವೆ ನೋಡೆ । ಮುದ್ದು ಬಾಲೆಯರ್ ಬನ್ನಿರೇ
ಶಂಕೆಯಿಲ್ಲದೆ ಹಣವ ಸುರಿದು । ವೆಂಕಟೇಶನ ಕಳುಹಿದ

ಲಕ್ಷ ತಪ್ಪು ಎನ್ನಲುಂಟು । ಪಕ್ಷಿವಾಹನ ಸಲಹೆನ್ನ
ಭಕ್ತಿಯಿಂದಲಿ ಹೇಳ್ಕೇಳ್ದವರಿಗೆ । ಮುಕ್ತಿ ಕೊಡುವ ಹಯವದನ

ಜಯ ಜಯ ಶ್ರೀನಿವಾಸನಿಗೆ । ಜಯ ಜಯ ಪದ್ಮಾವತಿಗೆ
ಬಲಿದಂತಹ ಶ್ರೀಹರಿಗೆ । ನಿತ್ಯ ಶುಭಮಂಗಳ

ಶೇಷಾದ್ರಿಗಿರಿವಾಸ | ಶ್ರೀದೇವಿ ಅರಸಗೆ

ಕಲ್ಯಾಣಮೂರುತಿಗೆ | ನಿತ್ಯಜಯಮಂಗಳ